ಮೈಸೂರ ಗೆಜೆಟ್ಟ

ಸರ್ಕಾರದಿಂದ ಪ್ರಕಟಿಸಲ್ಪಟ್ಟದ್ದು.

ಬೆಂಗಳೂರು, ಶನಿವಾರ, ಏಪ್ರೆಲ್ ತಾ॥ 23, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ

ಇಂಡ್ಯಾಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು, ಪಗ್ಗೈರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ಫಿನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳ್ಕೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫೇನ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜೂ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇನ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಅಂಚೇ ಇಲಾಖೆ.

ನಂ. 22—12. ತಾರೀಖು 13ನೇ ಏಪ್ರೆಲ್ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರ ಅಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಚೆ ಆಫೀಸುಗಳು ಸ್ಥಾಪಿಸಲ್ಪಟ್ಟಿರುತ್ತೆ.

ತಾಲ್ಲೂಕು.	ಅಂಚೆ ಆಫೀಸು ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಗೋರೀಬಿದನೂರು	ತರದಾಳು
ನಂಜನಗೂಡು	ಚಿಕ್ಕಯ್ಯನ ಛತ್ರ.

ಬಿ. ಮರಿಗಂಗ್ಯೆಯ್ಯ,
ಅಂಚೇ ಬಕ್ಷಿ.